ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2441
ಉತ್ತರಿಸಬೇಕಾದ ದಿನಾಂಕ	:	23.03.2022
ಸದಸ್ಯರ ಹೆಸರು	:	ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದ ಕಂದಾಯ ಇಲಾಖೆಯ ವ್ಯಾಪ್ತಿ ಯಲ್ಲಿ ಬರುವ ಭೂಮಿ ಕೇಂದ್ರಗಳಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	-ಹೌದು-
ಆ	ನಡೆದಿದ್ದಲ್ಲಿ, ಯಾವ ಯಾವ ಜಿಲ್ಲೆಗಳ ಕೇಂದ್ರಗಳಲ್ಲಿ ನಡೆದಿರುತ್ತವೆ; ಇವಗಳನ್ನು ಪತ್ತೆ ಹಚ್ಚಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ;	ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕು ಕಛೇರಿಯ ಭೂಮಿ ಕೇಂದ್ರದಲ್ಲಿ ಭೂಮಂಜೂರಿ ಪ್ರಕರಣಗಳ ಖಾತೆ ದಾಖಲು ಪ್ರಕ್ರಿಯೆಯಲ್ಲಿ ಅಕ್ರಮವಾಗಿ ಕ್ರಮವಹಿಸಿರುವುದು ಕಂಡುಬಂದಿರುತ್ತದೆ ಉಳಿದಂತೆ ಯಾವ ಭೂಮಿ ಕೇಂದ್ರಗಳಲ್ಲಿಯೂ ಅಕ್ರಮ ನಡೆದಿರುವುದು ಗಮನಕ್ಕೆ ಬಂದಿರುವುದಿಲ್ಲ. ಈ ಹಿನ್ನಲೆಯಲ್ಲಿ ತಾಲ್ಲೂಕಿನ ಭೂಮಿ ಕೇಂದ್ರಗಳಲ್ಲಿ ಓರ್ವ ತಹಶೀಲ್ದಾರ್ ರವರ ಲಾಗಿನ್ ಮಾತ್ರ ಕಾರ್ಯನಿರ್ವಹಿಸುವಂತೆ ಹಾಗೂ ವರ್ಗಾವಣೆ ಯಾದ ತಹಶೀಲ್ದಾರರ ಲಾಗಿನ್ ರದ್ದಾಗುವಂತೆ ತಂತ್ರಾಂಶದಲ್ಲಿ ಮಾರ್ಪಾಡು ಮಾಡಲಾಗಿದೆ.
ಇ	ಚಿಕ್ಕಮಗಳೂರು ಜಿಲ್ಲೆ, ಕಡೂರು ತಾಲ್ಲೂಕು, ಭೂಮಿ ಕೇಂದ್ರದಲ್ಲಿ ನಡೆದಿರುವ ಅಕ್ರಮ ಅವ್ಯವಹಾರದ ಬಗ್ಗೆ, ಜಿಲ್ಲಾಧಿಕಾರಿಗಳು ನೀಡಿರುವ ವರದಿಯ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಚಿಕ್ಕಮಗಳೂರು, ಜಿಲ್ಲೆಯ ಕಡೂರು ತಾಲ್ಲೂಕು ಕಛೇರಿಯ ಭೂಮಿ ಕೇಂದ್ರದಲ್ಲಿ ನಡೆದಿರುವ ಅಕ್ರಮ ಅವ್ಯವಹಾರದ ಬಗ್ಗೆ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ನಡೆದಿದೆ ಎನ್ನಲಾದ ಅಕ್ರಮದ ಬಗ್ಗೆ ವಿವರವಾದ ವರದಿ ಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಪತ್ರ ಹೊರಡಿಸಲಾಗಿದೆ. ಜಿಲ್ಲಾಧಿಕಾರಿಗಳು ಚಿಕ್ಕಮಗಳೂರು ಜಿಲ್ಲೆ, ಇವರಿಂದ ಸ್ವೀಕೃತವಾದ ವರದಿಯ ಆಧಾರದ ಮೇಲೆ ನಿಯಮಾನುಸಾರ ಕ್ರಮವಹಿಸಲಾಗುತ್ತದೆ.
ಈ	ಅಕ್ರಮದಲ್ಲಿ ಶಾಮೀಲಾಗಿರುವ ಅಧಿಕಾರಿಗಳು ಮತ್ತು ನೌಕರರು ಅದೇ ಸ್ಥಳದಲ್ಲಿಯೇ ಮುಂದು ವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಶಿರಸ್ತೇದಾರ್, ರಾಜಸ್ವನಿರೀಕ್ಷಕರು, ಗ್ರಾಮಲೆಕ್ಕಿಗರು. (ತಹಶೀಲ್ದಾರರನ್ನು ಹೊರತುಪಡಿಸಿ) ಇವರುಗಳನ್ನು ವರ್ಗಾವಣೆ ಮಾಡಲಾಗಿರುತ್ತದೆ.

ಕಂಇ 111 ಎಂಆರ್‌ಆರ್ 2022

(ಆರ್. ಅಶೋಕ)
ಕಂದಾಯ ಸಚಿವರು